# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:05/12/2020 ರಂದು **ಬೆಳಿಗ್ಗೆ:10.30** ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅಧ್ಯಕ್ಷತೆಯೊಂದಿಗೆ ಬೇಗೂರು ಉಪ-ವಿಭಾಗದ ಕಛೇರಿಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೆರೆಯ ಇಕ್ಕೆಲಗಳಲ್ಲಿ ಒಳಚರಂಡಿ ಪೈಪ್‌ಲೈನ್ ಅಳವಡಿಸುವ ಬಗ್ಗೆ,
2. ಕುಡಿಯುವ ನೀರು ಸರಬರಾಜು ಬಗ್ಗೆ,
3. ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡುವ ಬಗ್ಗೆ,
4. ವಾರ್ಡ್‌ನ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ,
5. ಬಾಕಿ ಇರುವ ಕಾಮಗಾರಿಗಳನ್ನು ಅತೀ ಜರೂರಾಗಿ ಪ್ರಾರಂಭಿಸುವ ಬಗ್ಗೆ,
6. ಬೀದಿ ದೀಪಗಳ ನಿರ್ವಹಣೆಯ ಬಗ್ಗೆ,
7. ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ,
8. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವ ಬಗ್ಗೆ.

**ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು**

| ಕ್ರ.ಸಂ | ಹೆಸರು | ಹುದ್ದೆ | ಹಾಜರಾತಿ |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | ಹಾಜರಾಗಿರುತ್ತಾರೆ |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | ಹಾಜರಾಗಿರುತ್ತಾರೆ |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | ಗೈರು ಹಾಜರು |
| 4 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | ಹಾಜರಾಗಿರುತ್ತಾರೆ |
| 5 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | ಗೈರು ಹಾಜರು |
| 6 | ಶ್ರೀ.ಸಂತೋಷ್ ದೀಪು | ಅರಣ್ಯ | ಹಾಜರಾಗಿರುತ್ತಾರೆ |
| 7 | ಶ್ರೀ.ರಮೇಶ್.ಎಲ್. | ಕಿ.ಆ.ಪ. | ಹಾಜರಾಗಿರುತ್ತಾರೆ |
| 8 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | ಹಾಜರಾಗಿರುತ್ತಾರೆ |
| 9 | ಶ್ರೀ.ರಮೇಶ್ | ಸದಸ್ಯರು | ಹಾಜರಾಗಿರುತ್ತಾರೆ |
| 10 | ಶ್ರೀ.ಮಂಜುನಾಥ | ಸದಸ್ಯರು | ಹಾಜರಾಗಿರುತ್ತಾರೆ |
| 11 | ಶ್ರೀ.ರಮೇಶ್ ಆರಾಧ್ಯ | ಸದಸ್ಯರು | ಹಾಜರಾಗಿರುತ್ತಾರೆ |

Scanned by CamScanner

| | | | |
|---|---|---|---|
| 12 | ಶ್ರೀಮತಿ.ಶಿಲ್ಪ ರಮೇಶ್ | ಸಧಸ್ಯರು | ಹಾಜರಾಗಿರುತ್ತಾರೆ |
| 13 | ಶ್ರೀ.ರವಿ | ಬೀದಿ ದೀಪ ನಿರ್ವಹಣೆ | ಗೈರು ಹಾಜರು |
| 14 | ಶ್ರೀ.ಮೋಹನ್ ಮುರಳಿ | ಸಧಸ್ಯರು | ಹಾಜರಾಗಿರುತ್ತಾರೆ |
| 15 | ಶ್ರೀ.ನರಸಪ್ಪ | ತೋಟಗಾರಿಕೆ ಇಲಾಖೆ | ಹಾಜರಾಗಿರುತ್ತಾರೆ |
| 16 | ಶ್ರೀ.ರಂಗಪ್ಪ ಸ.ಅ. | ಬಿ.ಡಬ್ಲ್ಯೂ.ಎಸ್.ಎಸ್.ಬಿ | ಗೈರು ಹಾಜರು |

## ಸಭೆಯ ನಡಾವಳಿಗಳು

1. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಬರುವಂತಹ ಕಮ್ಮನಹಳ್ಳಿ ಕೆರೆ, ಚಿಕ್ಕ ಬೇಗೂರು ಕೆರೆ, ಚಂದ್ರಶೇಖರ ಪುರ ಕೆರೆ, ಬೇಗೂರು ದೊಡ್ಡ ಕೆರೆಯ ಕಟ್ಟೆಗಳ ಪಕ್ಕದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಪೈಪ್ ಲೈನ್‌ಗಳನ್ನು ಅಳವಡಿಸಬೇಕಾಗಿದ್ದು ಸಂಬಂಧಪಟ್ಟ ಕೆರೆಯ ಅಭಿವೃದ್ಧಿ ಪ್ರಾಧಿಕಾರದಿಂದ ಅನುಮತಿ ನೀಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಹಾಜರಾಗಿದ್ದ ಶ್ರೀ.ಮಂಜುಳ, ಸಲಹೆಗಾರರು ಕೋರಿರುತ್ತಾರೆ.
   ಕ್ರಮ: ಈ ಬಗ್ಗೆ ಮುಂದಿನ ಸಭೆಗೆ ಕೆರೆಯ ಪ್ರಾಧಿಕಾರದಿಂದ ಹಾಜರಾಗಲು ಪತ್ರ ಬರೆಯಲು ಸಹಾಯಕ ಅಭಿಯಂತರರು, ವಾರ್ಡ್ ನಂ-192 ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸೂಚಿಸಲಾಯಿತು.

2. ವಾರ್ಡ್ ನಂ-192 ಬೇಗೂರು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಪ್ರದೇಶಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಈ ಬಗ್ಗೆ ದೂರು ಬರದಿರುವಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ನೀರು ಸರಬರಾಜು ಗುತ್ತಿಗೆದಾರರನ್ನು ಕರೆದು ಸೂಚನೆ ನೀಡುವಂತೆ ಹಾಗೂ ವಾಟರ್‌ಮ್ಯಾನ್‌ಗಳು ಪ್ರತಿದಿನ ಈ ಬಗ್ಗೆ ವರದಿಯನ್ನು ವಾರ್ಡ್‌ನ ಸಹಾಯಕ ಅಭಿಯಂತರರು ಪಡೆಯುವಂತೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.
   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192

3. ಸದರಿ ವಾರ್ಡ್‌ನ ಪರಿವೀಕ್ಷಣಾ ಸಮಯದಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಹಾಗೂ ದೈನಂದಿನ ಕಸ ಸಂಗ್ರಹಣೆ ಮಾಡದಿರುವ ಬಗ್ಗೆ ಹಾಗೂ ಸಾರ್ವಜನಿಕರು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಹಾಗೂ ಘನತ್ಯಾಜ್ಯದ ಬ್ಲಾಕ್‌ಸ್ಪಾಟ್‌ಗಳನ್ನು ತೆರವು ಮಾಡಲು ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.
   ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣಾ ಘಟಕ)

4. ಸಾರ್ವಜನಿಕರ ಕುಂದು ಕೊರತೆಗಳಲ್ಲಿ ಅಕ್ಷಯನಗರ ಪೂರ್ವ ಭಾಗದ ಸಾರ್ವಜನಿಕರು ರಸ್ತೆಯನ್ನು ನಿರ್ಮಾಣ ಮಾಡಿಕೊಡಬೇಕೆಂದು ಸಭೆಯಲ್ಲಿ ಹಾಜರಾಗಿದ್ದಂತಹ ಶ್ರೀಮತಿ.ಸುಧಾ ಮತ್ತು ಇತರರು ಕೋರಿದ್ದು ಈ ಬಗ್ಗೆ ಕ್ರಮವಹಿಸುವಂತೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.
   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192 ರವರು ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಯಿತು.

Scanned by CamScanner

5. ವಾರ್ಡ್‌ನಲ್ಲಿ ಮಂಜೂರಾಗಿ ಬಾಕಿ ಇರುವ ಕಾಮಗಾರಿಗಳನ್ನು ಅತೀ ಜರೂರಾಗಿ ಪ್ರಾರಂಭಿಸುವಂತೆ ಹಾಗೂ ಎಮ್.ಎಲ್.ಎ. ಬಡಾವಣೆಯಿಂದ ನೋಬೋ ನಗರಕ್ಕೆ ಸಂಪರ್ಕ ಕಲ್ಪಿಸಲು ರಸ್ತೆಯನ್ನು ನಿರ್ಮಾಣ ಮಾಡುವಂತೆ ಶ್ರೀ.ರಮೇಶ್ ಆರಾಧ್ಯ ರವರು ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ರವರಿಗೆ ಮನವಿ ಸಲ್ಲಿಸಿದರು.

   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192 ರವರು ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಯಿತು.

6. ವಾರ್ಡ್ ವ್ಯಾಪ್ತಿಯ ಬೀದಿ ದೀಪಗಳ ನಿರ್ವಹಣೆಯ ಬಗ್ಗೆ ಹಾಗೂ ಮೈಕೋ ಬಡಾವಣೆ ಮತ್ತು ಇತರೆ ಪ್ರದೇಶದ ಸಾರ್ವಜನಿಕರು ಬೀದಿ ದೀಪಗಳ ರಿಪೇರಿ ಬಗ್ಗೆ ಹಲವಾರು ಬಾರಿ ದೂರವಾಣಿ ಕರೆ ಮಾಡಿದ್ದರೂ ಸಹ: ಸ್ಪಂದಿಸದೇ ಇರುವ ಬಗ್ಗೆ ಬೇಸರ ವ್ಯಕ್ತಪಡಿಸಿರುತ್ತಾರೆ.

   ಕ್ರಮ: ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರು ಪ್ರತಿದಿನ ವಾರ್ಡ್ ಕಛೇರಿಯ ರಿಜಿಸ್ಟಾರ್‌ನಲ್ಲಿ ನಮೂದಾಗಿರುವ ಬೀದಿ ದೀಪಗಳ ನಿರ್ವಹಣೆಯ ರಿಪೇರಿಯ ಪಟ್ಟಿಯನ್ನು ಪಡೆದು ರಿಪೇರಿ ಮಾಡಿದ ನಂತರ ಸಾರ್ವಜನಿಕರಿಗೆ ಮಾಹಿತಿ ನೀಡತಕ್ಕದ್ದು ಎಂದು ಅಧ್ಯಕ್ಷರು ಸೂಚಿಸಿದರು.

7. ವಾರ್ಡ್ ವ್ಯಾಪ್ತಿಯಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಗುರುತಿಸಿ ಮುಚ್ಚುವ ಕಾರ್ಯವನ್ನು ಮುಂದುವರೆಸಲು ಸಾರ್ವಜನಿಕರು ಕೋರಿಕೊಂಡಿರುತ್ತಾರೆ.

   ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ-192, ಬೇಗೂರು, ಬಿ.ಬಿ.ಎಂ.ಪಿ

8. ಕೋವಿಡ್-19 ಟೆಸ್ಟ್‌ಗಳನ್ನು ಜನನಿಬಿಡ ಪ್ರದೇಶಗಳಲ್ಲಿ ಮುಂದುವರೆಸುವಂತೆ ಅಧ್ಯಕ್ಷರು ವೈದ್ಯಾಧಿಕಾರಿರವರಿಗೆ ಮಾನ್ಯ ವಾರ್ಡ್ ಕಮಿಟಿ ಅಧ್ಯಕ್ಷರುಸೂಚಿಸಿದರು

   ಕ್ರಮ: ವೈದ್ಯಾಧಿಕಾರಿಗಳು, ಬೇಗೂರು, ಪ್ರಾಥಮಿಕ ಆರೋಗ್ಯ ಕೇಂದ್ರ.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು 3/12
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಅವಗಾಹನೆಗೆ,
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ,
4) ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ ರವರ ಅವಗಾಹನೆಗೆ,
5) ಕಛೇರಿ ಕಡತಕ್ಕೆ

Scanned by CamScanner